ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರಸಕ್ತ ವರ್ಷದಲ್ಲಿ ನೀಡಿರುವ ಸಹಾಯಧನ.

1(134):

ಶ್ರೀ ಎಂ.ಎಸ್.ಆತ್ಮಾನಂದ (ಮಂಡ್ಯ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರ ತಿಳಿಸುವರೆ?

ಅ) ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಇಲಾಖೆಯವರ ಸಹಾಯಧನ ನೀಡಲಾಗುತ್ತಿದೆಯೆ;

ಆ) ಹಾಗಿದ್ದಲ್ಲಿ, ಪ್ರಸಕ್ತ ವರ್ಷದಲ್ಲಿ ನೀಡಲಾಗಿರುವ ಸಹಾಯಧನ ಮೊತ್ತವೆಷ್ಟು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು).

ಅ) ಹೌದು

ಆ) ಈವರೆಗೆ ನೀಡಲಾಗಿರುವ ಮೊತ್ತ:

1) ಯೋಜನೆ	ರೂ. 5,42,42,962-00
2) ಯೋಜನೇತರ	ರೂ. 7,01,89,113-00

ರಾಜ್ಯದಲ್ಲಿ ಉತ್ಪಾದಯನೆಯಾಗುವ ಸಕ್ಕರೆ ಪ್ರಮಾಣ.

2(135)

ಶ್ರೀ ಎಂ.ಎಸ್.ಆತ್ಮಾನಂದ(ಮಂಡ್ಯ): ಮಾನ್ಯ ಪಶು ಸಂಗೋಪನಾ ಮತ್ತು ಸಕ್ಕರೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರ ತಿಳಿಸುವರೆ?

ಅ) ರಾಜ್ಯದಲ್ಲಿ ಇರುವ ಒಟ್ಟು ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು?

ಆ) ಸದರಿ ಕಾರ್ಖಾನೆಗಳಿಂದ ಉತ್ಪಾದನೆಯಾಗುವ ಸಕ್ಕರೆಯ ಒಟ್ಟು ಪ್ರಮಾಣವೆಷ್ಟು?

ಇ) ಮೈಸೂರು ಸಕ್ಕರೆ ಕಾರ್ಖಾನೆಯು ಈವರೆಗೆ ಅರೆದಿರುವ ಕಬ್ಬಿನ ಪ್ರಮಾಣ ಎಷ್ಟು?